ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯಃ ನ.ರಾ.ಪುರ

ಸಿ.ಸಿ. ನಂಃ **502/2024**

ಫಿರ್ಯಾದುದಾರರು : ಶ್ರೀ. ಚಂದ್ರಶೇಖರ, ಬಿನ್. ರಂಗಪ್ಪ ಗೌಡ,
52 ವರ್ಷ, ವಾಸಃ ಬೈಪಾಸ್ ರಸ್ತೆ,
ಮೆಣಸೂರು ಗ್ರಾಮ, ಎನ್.ಆರ್. ಪುರ ತಾಲ್ಲೂಕು.

:ವಿಃ

ಆರೋಪಿ : ಶ್ರೀ. ದೇವರಾಜ್ ಎಸ್., ಬಿನ್. ಷಣ್ಮುಖಪ್ಪ,
36 ವರ್ಷ, ವಾಸಃ ಜೈಲು ರಸ್ತೆ ಹತ್ತಿರ, ಹಿಳುವಳ್ಳಿ ಗ್ರಾಮ,
ಎನ್.ಆರ್.ಪುರ ತಾಲ್ಲೂಕು.

ಆ ಪಾ ದ ನೆ

ಆರೋಪಿಯಾದ ನಿಮ್ಮ ವಿರುದ್ಧ ಫಿರ್ಯಾದುದಾರರು ದಾಖಲು ಮಾಡಿರುವ ಫಿರ್ಯಾದು ಏನೆಂದರೆ, ನೀವು ಆರೋಪಿ 5,00,000/- ರೂ.ಗಳ 12.3.2024 ನೇ ದಿನಾಂಕವನ್ನು ನಮೂದಿಸಿರುವ 991736 ನೇ ಸಂಖ್ಯೆಯ, ವಿಜಯ ಬ್ಯಾಂಕ್ (ಈಗ ಬ್ಯಾಂಕ್ ಆಫ್ ಬರೋಡ), ನರಸಿಂಹರಾಜಪುರ ಶಾಖೆಯ ಒಂದು ಚೆಕ್ಕನ್ನು ಫಿರ್ಯಾದುದಾರರಿಗೆ ಕೊಡಬೇಕಾದ ಹಣದ ಬಾಬ್ತು ನಗದೀಕರಣಕ್ಕಾಗಿ ನೀಡಿದ್ದು, ಫಿರ್ಯಾದುದಾರರು ಅದನ್ನು ಜಮಾವಣೆಗಾಗಿ ಬ್ಯಾಂಕಿನಲ್ಲಿ ಹಾಜರುಪಡಿಸಿದಾಗ, ಬ್ಯಾಂಕಿನವರು ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲವೆಂಬ ಹಿಂಬರಹದೊಂದಿಗೆ ಅದನ್ನು ವಾಪಾಸು ಮಾಡಿರುತ್ತಾರೆ ಹಾಗೂ ಈ ಬಗ್ಗೆ ನಿಮಗೆ ವಕೀಲರ ಮೂಲಕ ನೋಟೀಸನ್ನು ಕೊಟ್ಟರೂ ಸಹಾ ನೀವು ಆರೋಪಿ ಚೆಕ್ಕಿನಲ್ಲಿ ಒಳಗೊಂಡ ಹಣವನ್ನು ಮರುಪಾವತಿ ಮಾಡಿರುವುದಿಲ್ಲ. ಆದ್ದರಿಂದ, ನೀವು ಆರೋಪಿ ಫಿರ್ಯಾದುದಾರರಿಗೆ ಮೋಸ ಮಾಡಬೇಕೆನ್ನುವ ಉದ್ದೇಶದಿಂದ ಈ ರೀತಿಯ ಚೆಕ್ಕನ್ನು ನೀಡಿ ವರ್ಗಾವಣೀಯ ಲಿಖಿತ ಕಾಯ್ದೆ ಕಲಂ 138 ರ ಪ್ರಕಾರ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಿ.

Sd/-

ಪ್ರಃ1: ಈಗ ಓದಿ ಹೇಳಿದ ಆಪಾದನೆ ತಿಳಿಯಿತೇ?

ಉ : ತಿಳಿಯಿತು.

ಪ್ರಃ2 : ತಪ್ಪು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆ ಆಗಬೇಕಾ?

ಉ : ವಿಚಾರಣೆಯಾಗಬೇಕು

ಈ ಮೇಲ್ಕಂಡ ಆಪಾದನೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಹಾಗೂ ಸರಿಯಾಗಿದೆ ಎಂದು ದೃಢೀಕರಿಸುತ್ತೇನೆ.

ದಿನಾಂಕ : 4 ನೇ ದಿವಸ, ಫೆಬ್ರುವರಿ ಮಾಹೆ, 2026.

4/2/26

(ಜೀತು ಆರ್.ಎಸ್.)
ಸಿವಿಲ್ ನ್ಯಾಯಾಧೀಶರು ಮತ್ತು
ಪ್ರದನ್ಯಾದಂ., ನ.ರಾ. ಪುರ.